<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>

<u>ಸಿ.ಸಿ. ಸಂಖ್ಯೆಃ **475/2024**</u>

<u>ಪಿರ್ಯಾದಿ:</u> ರಾಜ್ಯ, ಪರವಾಗಿ ಬಾಳೂರು ಪೊಲೀಸ್ ಠಾಣೆ,
ಬಾಳೂರು.

ವಿರುದ್ಧ

<u>ಆರೋಪಿ</u>: ರೇವತಿ ದೀಪ್ತಿ ಮೆಂಡೋನ್ಸಾ, ವಯಸ್ಸು 47 ವರ್ಷ,
ಕೋಂ ಅರ್ನಾಡ್ ಮೇಂಡೋನ್ಸಾ,
ವಾಸ: ನಿರ್ಮಲ ಎಸ್ಟೇಟ್, ಕೂವೆ ಗ್ರಾಮ,
ಬಾಳೂರು ಹೋಬಳಿ, ಮೂಡಿಗೆರೆ ತಾಲ್ಲೂಕು.

<u>ದೋಷಾರೋಪಣೆ</u>

ಶ್ರೀ ವಿಶ್ವನಾಥ್.ಎ, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆಗಳು ಏನೆಂದರೆಃ-

ದಿನಾಂಕ 08.01.2024 ರಂದು ಬೆಳಗ್ಗೆ 11.30 ರ ಸಮಯದಲ್ಲಿ ಬಾಳೂರು ಪೊಲೀಸ್ ಠಾಣಾ ವ್ಯಾಪ್ತಿಯ ಕೂವೆ (ಗಬ್ಗಲ್) ಗ್ರಾಮ ಪಂಚಾಯತಿ ಅಸ್ಸೆಸ್ಮೆಂಟ್ ಸಂಖ್ಯೆಃ 367 ರ ತಲಗೂರು ಹ್ಯಾಂಡ್ ಪೋಸ್ಟ್ ಗ್ರಾಮದ ಚಾಸಾ7-ಲೀನಾ ಮಿಸ್ಕಿತ್ ರವರ ಮನೆಯ ಹತ್ತಿರ ಆರೋಪಿಯಾದ ನೀವು ಬಂದು, ತೋಟದ ಸಾಲದ ತೀರುವಳಿಯ ವಿಚಾರವಾಗಿ ಚಾಸಾ2-ಮಿಸ್ಕಿತ್ ರವರು ಮನೆ ನವೀಕರಣ (ರಿಪೇರಿ) ಕೆಲಸ ಮಾಡುವುದನ್ನು ಕಂಡು ಚಾಸಾ2 ರವರನ್ನು ಉದ್ದೇಶಿಸಿ ಸೂಳೇಮಕ್ಕ ನಮ್ಮ ಮನೆಯನ್ನು ತಿರುಚುತ್ತಿದ್ದೀರಾ? ಎಂದು ಆವಾಚ್ಯ ಶಬ್ಧಗಳಿಂದ ಬೈದು ಉದ್ದೇಶಪೂರ್ವಕವಾಗಿ ಶಾಂತಿಭಂಗವನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **504** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ.

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಚಾಸಾ2 ರವರ ಮನೆ ಒಳಗೆ ಅತಿಕ್ರಮವಾಗಿ ಪ್ರವೇಶವನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **448** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ.

**3.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಚಾಸಾ2 ರವರ ಮನೆಯ ಬೆಡ್ ರೂಂ ನಲ್ಲಿದ್ದ ಗಾಡ್ರೇಜ್ ಬೀರುವಿನ ಬಾಗಿಲು ತೆರೆದು ಬಟ್ಟೆಯನ್ನೆಲ್ಲ ಕಿತ್ತು ಹೊರಗಡೆ ನೆಲಕ್ಕೆ ಬಿಸಾಡಿ, ಮನೆ ಹೊರಗಡೆ ಅಂಗಳಕ್ಕೆ ಬಂದು ನಮ್ಮ ಮನೆಯನ್ನು ಹಾಳು ಮಾಡಿದ್ದೀರಾ ಎಂದು ಬೈಯುತ್ತಾ, ಅಂಗಳದಲ್ಲಿ ಹಾಕಿದ್ದ ಮಣ್ಣಿನ ಕೆಂಪು ಇಟ್ಟಿಗೆ ರಾಶಿಯಿಂದ ಎರಡು ಇಟ್ಟಿಗೆಗಳನ್ನು ತೆಗೆದುಕೊಂಡು ಮನೆಯ ಮುಂಬಾಗಿಲ ಎರಡು ಬದಿಯ ಕಿಟಕಿಯ ಬಾಗಿಲುಗಳಿಗೆ ಅಳವಡಿಸಿರುವ ಗಾಜು ಹೊಡೆದು ಅಂದಾಜು ರೂ.600/- ರೂಗಳಷ್ಟು ನಷ್ಟವನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **427** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ.

**4.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಹೋಗುವಾಗ ನಿಮ್ಮನ್ನು ಸುಮ್ಮನೆ ಬಿಡುವುದಿಲ್ಲವೆಂದು ಪ್ರಾಣ ಬೆದರಿಕೆ ಹಾಕಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **506** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರಃ 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

*(ದಿನಾಂಕ 08.01.2025 ರಂದು ದೋಷಾರೋಪಣೆಯನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ)*

**Sd/-**

ಮೂಡಿಗೆರೆ
ದಿನಾಂಕಃ 08.01.2025

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.